ಕರ್ನಾಟಕ ಸರ್ಕಾರ

# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ

(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)

Government of Karnataka

# Karnataka Residential Educational Institutions society

(An Organisation of Govt. of Karnataka)

ಕವಶಿಸಸ/ಸಿಆರ್(ಶಿಕ್ಷಣ) 109/2011-12. ದಿನಾಂಕ:28-08-2012

ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು/
ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ
ಕಲ್ಯಾಣ ಇಲಾಖೆ, ಯೋಜನಾ ಸಮನ್ವಯ ಅಧಿಕಾಲಿಗಳು
ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ,
---------------- ಜಿಲ್ಲೆ

ಮಾನ್ಯರೇ,

**ವಿಷಯ:** ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಿಗೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಿಸಿರುವ ಬಗ್ಗೆ

***********

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದವತಿಯಿಂದ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಿಗೆ ನೇರ ನೇಮಕಾತಿ ಹೊಂದಿದ ಹಾಗೂ ವಿಲೀನಗೊಂಡು ನೇಮಕವಾದ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಕೌನ್ಸಿಲಿಂಗ್ ಮೂಲಕ ನೇಮಕಾತಿ ಮಾಡಿಕೊಂಡಿರುವುದು ಸರಿಯಷ್ಟೇ. ಈಗಾಗಲೇ ಸಾಮಾನ್ಯ ವರ್ಗ(GM) ದಲ್ಲಿ ಆಯ್ಕೆಯಾದ ಸಿಬ್ಬಂದಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ ಮತ್ತು ಜಾತಿ ಸಿಂಧುತ್ವದಡಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಸಿಂಧುತ್ವ ಪ್ರಮಾಣ ಪತ್ರವನ್ನು ಹಾಜರು ಪಡಿಸಿ ಅವರು ಕೂಡ ನೇಮಕಾತಿ ಆದೇಶ ಪಡೆದು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.

ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಿಗೆ ನೇರ ನೇಮಕಾತಿ ಮೂಲಕ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವ ಮೊದಲು ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸಿಬ್ಬಂದಿಗಳನ್ನು ಪಡೆದು ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಪಾಠ ಪ್ರವಚನಗಳನ್ನು ನೀಡಿ ವಸತಿ ಶಾಲೆಗಳನ್ನು ನಿರ್ವಹಿಸಲಾಗುತ್ತಿತ್ತು. ಇದು ತಮಗೂ ತಿಳಿದಿರುವ ವಿಷಯವಾಗಿರುತ್ತದೆ. ಸದರಿ ಹೊರ ಸಂಪನ್ಮೂಲ ಸಿಬ್ಬಂದಿಗಳು ಮಾನ್ಯ ಉಚ್ಛನ್ಯಾಯಾಲಯದಿಂದ ತಡೆಯಾಜ್ಞೆ ತಂದು ವಸತಿ ಶಾಲೆಗಳಲ್ಲಿ ನ್ಯಾಯಾಲಯದ ಆದೇಶದ ಮೇರೆಗೆ ಮುಂದುವರಿಯುತ್ತಿದ್ದಾರೆ. ಈಗಲೂ ಸಹ ಕೆಲವು ಹೊರಸಂಪನ್ಮೂಲ ಸಿಬ್ಬಂದಿಗಳು ಉಚ್ಛನ್ಯಾಯಾಲಯದಿಂದ ಆದೇಶ ತಂದು ವಸತಿ ಶಾಲೆಗಳಲ್ಲಿ ಮುಂದುವರಿಸಲು ಕೋರುತ್ತಿದ್ದಾರೆ. ಆದರೆ, ದಿನಾಂಕ:13-07-2012ರಂದು ಮಾನ್ಯ ಉಚ್ಛ ನ್ಯಾಯಾಲಯ ಅಂತಿಮ ಆದೇಶ ನೀಡಿರುತ್ತದೆ. ಈ ಆದೇಶ ನೀಡುವ ಮುಂಚೆಯೇ ತಡೆಯಾಜ್ಞೆ ಪಡೆದ ಹೊರಸಂಪನ್ಮೂಲ ಸಿಬ್ಬಂದಿಗಳನ್ನು ಮಾತ್ರ ಮುಂದುವರಿಸಬೇಕಾಗಿರುತ್ತದೆ. ದಿನಾಂಕ:13-07-2012ರ ನಂತರ ನ್ಯಾಯಾಲಯದಿಂದ ತಡೆಯಾಜ್ಞೆ ತಂದು ಮುಂದುವರಿಯಲು ಕೋರುತ್ತಿರುವ ಮಾನವ ಹೊರಸಂಪನ್ಮೂಲ ಸಿಬ್ಬಂದಿಗಳನ್ನು ನೇರವಾಗಿ ನೀವೇ ನೇಮಕ ಮಾಡಿಕೊಂಡು ಮುಂದುವರಿಸಿರುತ್ತಿರುವ ವಿಷಯ ನನಗೆ ತಿಳಿದು ಬಂದಿದೆ. ಆದ್ದರಿಂದ ದಿನಾಂಕ:13-07-2012ರ ನಂತರ ನ್ಯಾಯಾಲಯದಿಂದ ತಡೆಯಾಜ್ಞೆ ತಂದು ಮುಂದುವರಿಯಲು ಕೋರುತ್ತಿರುವ ಹೊರಸಂಪನ್ಮೂಲ ಸಿಬ್ಬಂದಿಗಳನ್ನು ಸಂಘದ ಕಛೇರಿಗೆ ಕಳುಹಿಸಲು ತಿಳಿಸಿದೆ. ಹಾಗೂ ನೇರ ನೇಮಕಾತಿ ಹೊಂದಿದ ಸಿಬ್ಬಂದಿಗಳನ್ನು ಕರ್ತವ್ಯದಿಂದ ಬಿಡುಗಡೆ ಮಾಡಿ ಸಂಘದ ಕಛೇರಿಗೆ ಕಳುಹಿಸುತ್ತಿರುವುದು ಸರಿಯಾದ ಮಾರ್ಗವಾಗಿರುವುದಿಲ್ಲ. ಕಾರಣ ನ್ಯಾಯಾಲಯದ ಆದೇಶದಲ್ಲಿ "ನೇರ ನೇಮಕಾತಿ ಹೊಂದಿದ ಸಿಬ್ಬಂದಿಗಳನ್ನು ಕರ್ತವ್ಯದಿಂದ ಬಿಡುಗಡೆ ಮಾಡಿ" ಎಂದು ತಿಳಿಸಿರುವುದಿಲ್ಲ. ಆದ್ದರಿಂದ ಮಾನ್ಯ ಉಚ್ಛ ನ್ಯಾಯಾಲಯದ ಆದೇಶದ ಮೇರೆಗೆ ಮುಂದುವರಿದ ಹೊರ ಸಂಪನ್ಮೂಲ ಸಿಬ್ಬಂದಿಗಳು ಹಾಗೂ ನೇರ ನೇಮಕಾತಿ ಮೂಲಕ ನೇಮಕವಾದ ಸಿಬ್ಬಂದಿಗಳಿಗೆ ಅದೇ ಹುದ್ದೆಯಲ್ಲಿಯೇ ಕರ್ತವ್ಯ ವಿಂಗಡಣೆ ಮಾಡಿ ನೇಮಕವಾದ ವಸತಿ ಶಾಲೆಗಳಲ್ಲೇ ಕರ್ತವ್ಯ ನಿರ್ವಹಿಸುವಂತೆ, ಕ್ರಮ ಕೈಗೊಳ್ಳಲು ತಿಳಿಸಿದೆ.

ತಮ್ಮ ವಿಶ್ವಾಸಿ,

(ಸಹಿ)

ಕಾರ್ಯನಿರ್ವಾಹಕ ನಿರ್ದೇಶಕರು